ತಾರೀಖು 7ನೆ ಮಾರ್ಚಿ 1907.

ನಂ. 7845–ಸ್ಯಾನಿಟರಿ 166-06-4, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಪಡಿಸುವುದೇನೆಂದರೆ :— ತಿವಮೊಗ್ಗ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶಗಳು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್ನಾಮೆಗಳೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶಗಳೆಂದು ಎಣಿಸಲ್ಪಡುವವು.

ಸ್ಥಳ.				ತಾಲ್ಲೂಕು.
ದಾಸಕೊಪ್ಪ	...	...	...	ಸಾಗರ.
ಹೊಸೂರು ಕ್ಯಾಂಪು				ಈಂಸಿ ಸಬ್ ತಾಲ್ಲೂಕು

ತಾರೀಖು 12ನೆ ಮಾರ್ಚಿ 1907.

ನಂ. 8161—ಸ್ಯಾನಿಟರಿ 99–06—6, ಹಾಸನ ಡಿಸ್ಟ್ರಿಕ್ಟ್ ಬೇಲೂರು ತಾಲ್ಲೂಕಿನ ಬೇಲೂರಿಗೆ ಶ್ರೀ ಚನ್ನಕೇಶವ ಸ್ವಾಮಿಯವರ ರಥೋತ್ಸವ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮದ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮದ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮಾರ್ಚಿ 20ನೆ ತಾರೀಖಿನಿಂದ 1907ನೆಯ ವರ್ಷದ ಏಪ್ರಿಲ್ 5ನೆ ತಾರೀಖಿನ ವರಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸುತ್ತಾರೆ.

ಈ ಇಸ್ತಿಹಾರ್ನಾಮೆಗೆ ವಿರೋಧವಾಗಿ ಮಲ್ಲಂಡ ರಥೋತ್ಸವಕ್ಕೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 16ನೆ ಮಾರ್ಚಿ 1907.

ನಂ. 8297—ಸ್ಯಾನಿಟರಿ 66–06—35, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಪಡಿಸುವುದೇನಂದರೆ :—ಹಾಸನ ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶವು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್ನಾಮೆಗಳೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶವೆಂದು ಎಣಿಸಲ್ಪಡುವುದು.

ಸ್ಥಳ.			ತಾಲ್ಲೂಕು.
ಕಡವಿನಕೋಟೆ	...	...	ಹೊಳೆನರಸೀಪುರ.

ತಾರೀಖು 16ನೆ ಮಾರ್ಚಿ 1907.

ನಂ. 8299—ಸ್ಯಾನಿಟರಿ 15–06—10, ಸಮಸ್ತ ಜನರ ತಿಳಿವಳಿಕೆಯ ಬಗ್ಗೆ ಇದರಿಂದ ಪ್ರಸಿದ್ಧಪಡಿಸುವದೇನೆಂದರೆ :— ಮೈಸೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶಗಳು ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್ನಾಮೆಗಳೊಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗು ತಗುಲಿದ ಪ್ರದೇಶಗಳೆಂದು ಎಣಿಸಲ್ಪಡುವವು.

ಸ್ಥಳ.				ತಾಲ್ಲೂಕು.
ಕುಕ್ಕರಹಳ್ಳಿ	...	...	...	ಮೈಸೂರು.
ಕಾವನಕೆರೆಹುಂಡಿ	...	...	...	ಟಿಕೋ
ನಂಜನಗೂಡು			...	ನಂಜನಗೂಡು.

ತಾರೀಖು 16ನೆ ಮಾರ್ಚಿ 1907.

ನಂ. 8301–ಸ್ಯಾ. 170–06–13; ಮೈಸೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಒಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಆ ಸ್ಥಳಗಳಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ :—

ಜಾತ್ರೆಯ ಹೆಸರು.	ನಡೆಯುವ ಸ್ಥಳ.	ತಾಲ್ಲೂಕು.	ತಾರೀಖು	
			ಇಂದ	ಗೆ
1. ಶ್ರೀ ಲಕ್ಷ್ಮೀಕಾಂತಸ್ವಾಮಿ ರಥೋತ್ಸವ.	ಕಳಲೆ ...	ನಂಜನಗೂಡು ..	1907ನೆ ಏಪ್ರಿಲ್ 1ನೆ ತಾರೀಖು.	
2. ಸಂಗಮ ಜಾತ್ರೆ	ತಿಪ್ಪೂರು	ಎಡತೊರೆ ...	15—5—07	18—5—07
3. ನರಸಿಂಹಸ್ವಾಮಿ ರಥೋತ್ಸವ.	ಸಾಲಗ್ರಾಮ ...	ಟಿಕೋ ..	15—5—07	18—5—07

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ಸೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಶ್ರೀಮನ್ ಮಹಾರಾಜರವರ ಸರ್ಕಾರದವರು ಪ್ರತಿ ಒಂದು ಜಾತ್ರೆಯ ಪಕ್ಕದಲ್ಲಿಯೂ ನಮೂದಿಸಿರುವ ತಾರೀಖುಗಳಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಆ ಜಾತ್ರೆಯ ಸ್ಥಳಕ್ಕೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 16ನೆ ಮಾರ್ಚಿ 1907.

ನಂ. 8306—ಸ್ಯಾನಿಟೆರಿ 139-06—12, ಸಮಸ್ತ ಜನರ ತಿಳಿವಳಿಕೆಯ ಬಗ್ಯೆ ಇದರಿಂದ ಪ್ರಸಿದ್ಧಪಡಿಸುವುದೇನಂದರೆ :—ಬೆಂಗಳೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಪ್ರದೇಶಗಳು ಎಪ್ಡಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನ್ಸ್ ಎಂಬ ಸಾಂಕ್ರಾಮಿಕ ಜಾಡ್ಯಗಳಿಗೆ ಸಂಬಂಧಪಟ್ಟ ಕಾನೂನನ್ನು ಅನುಸರಿಸಿ 1898ನೆಯ ವರ್ಷದ ಫೆಬ್ರವರಿ 10ನೆಯ ತಾರೀಖಿನ ನಂಬರ್ 9383—ಮಿಸಲೇನಿಯಸ್ ಫೈಲ್ 21—96 ಮತ್ತು ನಂಬರ್ 9384—ಮಿಸಲೇನಿಯಸ್ ಫೈಲ್ 21—96 ಈ ನಂಬರುಗಳ ಇಸ್ತಿಹಾರ್‌ನ ಮೇಗಳೂಡನೆ ಪ್ರಕಟಿಸಲ್ಪಟ್ಟ ರೆಗ್ಯುಲೇಷನುಗಳ ಉದ್ದೇಶಾರ್ಥಗಳಿಗಾಗಿ ಪ್ಲೇಗುತಗುಲಿದ ಪ್ರದೇಶಗಳೆಂದು ಎಣಿಸಲ್ಪಡುವವು.

ಸ್ಥಳ.	ತಾಲ್ಲೂಕು.
ಕನ್ನೆಲ್ಲಿ ...	ಬೆಂಗಳೂರು.
ಕೊಡಿಗಲ್ಲಿ ...	ಡಿಟೋ
ಚಿಕ್ಕ ಬಾಣಾವಾರ ...	ಡಿಟೋ
ಚಲ್ಲಘಟ್ಟೆ	ಡಿಟೋ
ದಿರ್ವಾರಪಾಳ್ಯ ...	ಡಿಟೋ
ಆಡಿಗೊಂಡಹಳ್ಳಿ ...	ಆನೇಕಲ್ಲು.
ಅಲ್ಲಳ್ಳಿ ...	ಡಿಟೋ
ಆಡಿಗಾರ್ನಹಳ್ಳಿ ...	ಡಿಟೋ
ವೇಡಹಳ್ಳಿ ...	ಡಿಟೋ
ಬಲ್ಲೂರು ...	ಡಿಟೋ
ಹಂಡೇನಹಳ್ಳಿ ...	ಹೊಸಕೋಟೆ.

ತಾರೀಖು 18ನೆ ಮಾರ್ಚಿ 1907.

ನಂ. 8481—ಸ್ಯಾ. 170-06-16, ಮೈಸೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಆ ಸ್ಥಳಗಳಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡು ಬಂದಿರುವುದರಿಂದ :—

ಜಾತ್ರೆಯ ಹೆಸರು.	ನಡೆಯುವ ಸ್ಥಳ.	ತಾಲ್ಲೂಕು.	ತಾರೀಖು ಇಂದ	ತಾರೀಖು ಗೆ
1. ಚಿಕ್ಕದೇವರ ರಥೋತ್ಸವ	ಚಿಕ್ಕತಾಸಿನಕೆರೆ ...	ಮಳವಳ್ಳಿ	29—3—07	31—3—07
2. ಶ್ರೀ ಲಕ್ಷ್ಮೀನರಸಿಂಹಸ್ವಾಮಿ ರಥೋತ್ಸವ.	ನೊರೆಹಳ್ಳಿ ...	ಡಿಟೋ	30—5—07	1—6—07

1897ನೆ ವರ್ಷದ 2ನೆ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಶ್ರೀಮನ್ ಮಹಾರಾಜರವರ ಸರ್ಕಾರದವರು ಪ್ರತಿ ಒಂದು ಜಾತ್ರೆಯ ಪಕ್ಕದಲ್ಲಿಯೂ ನಮೂದಿಸಿರುವ ತಾರೀಖುಗಳಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಆ ಜಾತ್ರೆಯ ಸ್ಥಳಕ್ಕೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 20ನೆ ಮಾರ್ಚಿ 1907.

ನಂ. 8623—ಸ್ಯಾನಿಟೆರಿ 150-06—8, ಬೆಂಗಳೂರು ಡಿಸ್ಟ್ರಿಕ್ಟು ಆನೇಕಲ್ಲು ತಾಲ್ಲೂಕಿನ ಮಾಯಸಂದ್ರ ಗ್ರಾಮಕ್ಕೆ ಮುತ್ಯಾಲಮ್ಮನವರ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ :—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸೆಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಮಾರ್ಚಿ 30ನೆ ತಾರೀಖಿನಿಂದ 1907ನೆ ಇಸವಿ ಏಪ್ರೆಲ್ 2ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನ ಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.